(ಇಂದು ದಿನಾಂಕಃ 20-02-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು)

**<u>ಮುಖ್ಯ ವಿಚಾರಣೆಃ ಶ್ರೀ. RSK ಎದುರುದಾರರ ಪರವಕೀಲರಿಂದ</u>**

1. ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಂತಹ ವಿಷಯಗಳು ಸರಿಯಾಗಿವೆ. ಅದನ್ನು ನಾನೇ ಹೇಳಿ ಬರೆಸಿದ್ದೇನೆ.

- ಅಧಿಕಾರ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿ.ಆರ್-1 ಎಂದು, ಗುರುತಿಸಲಾಯಿತು.
- ವಿಮೆ ಪಾಲಿಸಿಯನ್ನು ಹಾಜರುಪಡಿಸಿದ್ದು ಅದನ್ನು ನಿ.ಆರ್-2 ಎಂದು, ಗುರುತಿಸಲಾಯಿತು.

**<u>ಪಾಟೀ ಸವಾಲುಃ ಶ್ರೀ VSK ಅರ್ಜಿದಾರ ಪರ ವಕೀಲರಿಂದಃ</u>**

ಅಪಘಾತವಾಯಿತು ಎನ್ನಲಾದ ದಿನ ಪಾಲಿಸಿ ಚಾಲನೆಯಲ್ಲಿ ಇತ್ತು ಎಂದರೆ ಸರಿ. ಮೃತ ವ್ಯಕ್ತಿಯು ನಮ್ಮ ಕಂಪನಿಯ ವಿಮಾ ಪಾಲಿಸಿಗೆ ಒಳಪಟ್ಟ ವಾಹನದ ಅಪಘಾತದಿಂದ ಆದ ಗಾಯಗಳಿಂದ ಮೃತಪಟ್ಟಿರುತ್ತಾನೆ ಎಂದರೆ ಸರಿಯಲ್ಲ. ನಿ.ಪಿ-9 ರಲ್ಲಿ ಮೃತಕ್ಕೆ ಕಾರಣವು ಕಾಲಿನ ತೀವ್ರ ನೋವು, ಗಾಯದ ಅಲರ್ಜಿಯಿಂದ ಆಗಿರುತ್ತದೆ ಎಂದು ನಮೂದು ಮಾಡಿರುತ್ತಾರೆ ಎಂದರೆ ಮೃತ ವ್ಯಕ್ತಿಯ ಶವ ಪರೀಕ್ಷಾ ವರದಿಯನ್ನು ಸಲ್ಲಿಸಿರುವುದಿಲ್ಲ. ನಿ.ಪಿ-9 ರಲ್ಲಿ ಮೃತ ವ್ಯಕ್ತಿಯು ಅಪಘಾತದ ಗಾಯದಿಂದ ಮೃತಪಟ್ಟಿರುತ್ತಾನೆ ಎಂದು ನಮೂದಿಸಿರುತ್ತಾರೆ ಎಂದರೆ ಸರಿಯಲ್ಲ. ನಿ.ಪಿ-5 ರಲ್ಲಿ ಗಾಯವು ಅಪಘಾತದಿಂದ ಆಗಿರುತ್ತದೆ ಎಂದರೆ ಮರಣೋತ್ತರ ಪರೀಕ್ಷಾ ವರದಿಯನ್ನು ಸಲ್ಲಿಸಿರುವುದಿಲ್ಲ. ನಿ.ಪಿ-7 ರಲ್ಲಿ ದ್ವಿಚಕ್ರದ ವಾಹನದ ಮೇಲಿಂದ ಬಿದ್ದ ಗಾಯದಿಂದ ಅಪಘಾತದಿಂದ ಆಗಿರುತ್ತದೆ ಎಂದು ನಮೂದಿಸಿರುತ್ತಾರೆ ಎಂದರೆ ಮರಣೋತ್ತರ ಪರೀಕ್ಷಾ ವರದಿಯನ್ನು ಸಲ್ಲಿಸಿರುವುದಿಲ್ಲ.

ನಮ್ಮ ಕಂಪನಿಗೆ ಒಳಪಟ್ಟ ಇನ್ಸೂರೆನ್ಸ ವಾಹನದಿಂದ ಅಪಘಾತವಾಗಿದ್ದರೂ ಪರಿಹಾರವನ್ನು ಕೊಡಬಾರದು ಅನ್ನುವ ಉದ್ದೇಶದಿಂದ ಸುಳ್ಳು ಪ್ರಮಾಣ ಪತ್ರವನ್ನು ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ಮುಖ್ಯ ವಿಚಾರಣೆಯಲ್ಲಿ ಬರೆದಿರುವ ವಿಷಯಗಳು ಸುಳ್ಳು ಇರುತ್ತವೆ ಎಂದರೆ ಸರಿ ಅಲ್ಲ.

**<u>ಮರು ವಿಚಾರಣೆ ಇಲ್ಲ.</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ. ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು,
ಮತ್ತು ಜೆ.ಎಮ್. ಎಫ್. ಸಿ,
ಚಿಂಚೋಳಿ.